**ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಪ್ರದನ್ಯಾದಂಗಳವರ ನ್ಯಾಯಾಲಯ, ಕಡೂರು ತಾಲ್ಲೂಕು, ಚಿಕ್ಕಮಗಳೂರು ಜಿಲ್ಲೆ**

**ಎಂ.ವಿ.ಸಿ.ನಂ. 165/2019**

ಆರ್‌ಡಬ್ಲ್ಯೂ: 1

ದಿನಾಂಕ 12-09-2024 ರಂದು ಪ್ರಮಾಣ ವಚನ ಬೋಧಿಸಲಾಯಿತು.

ಮುಖ್ಯ ವಿಚಾರಣೆ: 3 ನೇ ಎದುರುದಾರರ ಪರ: ಶ್ರೀ ಸಿ ಜೆ ಎಂ ವಕೀಲರಿಂದ:

ನಾನು ಈ ಅರ್ಜಿಯಲ್ಲಿ 3 ನೇ ಎದುರುದಾರರ ಕಂಪನಿಯಲ್ಲಿ ಹಿರಿಯ ಸಹಾಯಕನಾಗಿರುತ್ತೇನೆ. ನನ್ನ ಮುಖ್ಯ ವಿಚಾರಣೆ ಹೇಳಿಕೆ ಸಾಕ್ಷ್ಯ ಪ್ರಮಾಣ ಪತ್ರವನ್ನು ಸಲ್ಲಿಸಿರುತ್ತೇನೆ. ಅದರಲ್ಲಿ ಬರೆದಿರುವ ವಿಷಯವೆಲ್ಲಾ ಸತ್ಯವಾಗಿರುತ್ತದೆ. ಅದನ್ನು ಓದಿ ನೋಡಿ ಸಹಿ ಮಾಡಿರುತ್ತೇನೆ.

ಕಂಪನಿಯವರು ನೀಡಿರುವ ಆತರೈಸೇಷನ್ ಲೆಟರನ್ನು ಹಾಜರುಪಡಿಸಿದ್ದು ಅದನ್ನು ನಿಆರ್-1 ಎಂದು, ವಿಮಾ ಪಾಲಿಸಿಯನ್ನು ಹಾಜರುಪಡಿಸಿದ್ದು ಅದನ್ನು ನಿಆರ್-2 ಎಂದು, ಪ್ರಥಮ ವರ್ತಮಾನ ವರದಿಯ ದೃಡೀಕೃತ ನಕಲನ್ನು ಹಾಜರುಪಡಿಸಿದ್ದು ಅದನ್ನು ನಿಆರ್-3 ಎಂದು, ದೂರಿನ ದೃಡೀಕೃತ ನಕಲನ್ನು ಹಾಜರುಪಡಿಸಿದ್ದು ಅದನ್ನು ನಿಆರ್-4 ಎಂದು,ದೋಷಾರೋಪಣಾ ಪತ್ರದ ದೃಡೀಕೃತ ನಕಲನ್ನು ಹಾಜರುಪಡಿಸಿದ್ದು ಅದನ್ನು ನಿಆರ್-5 ಎಂದು, ಸ್ಥಳ ಮಹಜರಿನ ದೃಡೀಕೃತ ನಕಲನ್ನು ಹಾಜರುಪಡಿಸಿದ್ದು ಅದನ್ನು ನಿಆರ್-6 ಎಂದು, ಅಮಾನತ್ತು ಮಹಜರಿನ ದೃಡೀಕೃತ ನಕಲನ್ನು ಹಾಜರುಪಡಿಸಿದ್ದು ಅದನ್ನು ನಿಆರ್-7 ಎಂದು ಗುರುತಿಸಲಾಯಿತು.

ಪಾಟೀ ಸವಾಲುಃ ಅರ್ಜಿದಾರರ ಪರಃ ಶ್ರೀಮತಿ ಡಿ ಸಿ ಎಸ್ ವಕೀಲರಿಂದಃ

1 ನೇ ಎದುರುದಾರರ ತಪ್ಪಿನಿಂದಲೇ ಅಪಘಾತವಾಗಿದೆ ಎಂದರೆ ಸರಿಯಲ್ಲ. ಅಪಘಾತವಾದ ದಿನ ವಿಮಾ ಪಾಲಿಸಿ ಚಾಲ್ತಿಯಲ್ಲಿತ್ತು ಎಂದರೆ ಸರಿ. ಆದ್ದರಿಂದ ನಮ್ಮ ಸಂಸ್ಥೆಯವರು ಪರಿಹಾರ ನೀಡಲು ಬಾದ್ಯರು ಎಂದರೆ ಸರಿಯಲ್ಲ.

ಮರುವಿಚಾರಣೆಃ ಇಲ್ಲ

(ನನ್ನ ಉಕ್ತಲೇಖನದಂತೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು)

ಓ ಹೇ ಕೇ ಸ ಇ ಎ ಒ

ಸೀನಿಯರ್ ಸಿವಿಲ್ ಜಡ್ಜ್ ಮತ್ತು ಪ್ರದನ್ಯಾದಂ.
ಕಡೂರು.